ದಿನಾಂಕ ಃ 14.03.2024

ಅಸಲು ದಾವೆ: 56/2017

ಪಿ.ಡಬ್ಲ್ಯೂ: 1

<u>ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**<u>ಪಾಟೀ ಸವಾಲು ಃ 5 ನೇ ಪ್ರತಿವಾದಿ ಪರ ವಕೀಲರಾದ ಶ್ರೀ ಜಿ.ಎನ್.ಎಸ್. ರವರಿಂದ ಃ</u>**

2 ನೇ ಪ್ರತಿವಾದಿ ನನ್ನ ಅಣ್ಣನ ಹೆಂಡತಿ. 3 ಮತ್ತು 4 ನೇ ಪ್ರತಿವಾದಿಗಳು ನನ್ನ ಅಣ್ಣನ ಮಕ್ಕಳು. ದಾವಾ ಐಟಂ ನಂ.8 ನನ್ನ ಅಣ್ಣ ಜಯಣ್ಣಗೌಡರ ಭಾಗಕ್ಕೆ ಹೋಗಿತ್ತು ಎಂದರೆ ಸರಿಯಲ್ಲ. ಅದರಂತೆ ಅವರ ಹೆಸರಿಗೆ ಖಾತೆ ಬದಲಾವಣೆ ಆಗಿ ಆರ್.ಟಿ.ಸಿ. ಬರುತ್ತಿತ್ತು ಮತ್ತು ಅವರೇ ಪ್ರತ್ಯೇಕ ಸ್ವಾಧೀನದಲ್ಲಿ ಇದ್ದರು ಎಂದರೆ ಸರಿಯಲ್ಲ. ನನ್ನ ಅಣ್ಣ ತೀರಿಕೊಂಡ ನಂತರ ಅವರ ಹೆಂಡತಿ ಅಂದರೆ 2 ನೇ ಪ್ರತಿವಾದಿ ಹೆಸರಿಗೆ ಖಾತೆಯಾಗಿರುತ್ತದೆ ಎಂದರೆ ಸಾಕ್ಷಿಯು ಒಟ್ಟಿಗೆ ಇದ್ದೆವು ಎಂದು ನುಡಿಯುತ್ತಾರೆ. ನನ್ನ ಅಣ್ಣನ ಭಾಗಕ್ಕೆ ಬಂದ ಆಸ್ತಿಯನ್ನು ದಿನಾಂಕ 25.11.2016 ರಂದು 5 ನೇ ಪ್ರತಿವಾದಿಗೆ ಕಾನೂನುಬದ್ಧವಾಗಿ ಮಾರಾಟ ಮಾಡಿದ್ದು ಅವರ ಹೆಸರಿಗೆ ಖಾತೆ ಬದಲಾವಣೆ ಆಗಿ ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ದಾವಾ ಐಟಂ ನಂ.8 ರಲ್ಲಿ ನನಗೆ ಯಾವುದೇ ಹಕ್ಕು ಇಲ್ಲದೆ ಇದ್ದರೂ ಕೂಡ ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಐಟಂ ನಂ.8 ನನ್ನ ಅಣ್ಣನ ಭಾಗಕ್ಕೆ ಬಂದಿದ್ದರೂ ಕೂಡ ನಾವೆಲ್ಲರೂ ಒಟ್ಟಿಗೆ ಇದ್ದೇವೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು

ಮದ್ದೂರು.